ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು

PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ ದಿನಾಂಕ : DATE : 18/05/2017

# ಮಾಜಿ ಶಾಸಕ ಸಂಭಾಜಿ ಪಾಟೀಲ್ ವಿಧಿವಶ

## ಹೃದಯಾಘಾತದಿಂದ ಕೊನೆಯುಸಿರು ಶಹಾಪುರದಲ್ಲಿಂದು ಬೆಳಗ್ಗೆ ಅಂತ್ಯಕ್ರಿಯೆ

• ಕನ್ನಡಪ್ರಭ ವಾರ್ತೆ ಬೆಳಗಾವಿ



ಬೆಳಗಾವಿ ದಕ್ಷಿಣ ಕ್ಷೇತ್ರದ ಮಾಜಿ ಶಾಸಕ, ಮಹಾರಾಷ್ಟ್ರ ಏಕೀಕರಣ ಸಮಿತಿ ಮುಖಂಡ ಸಂಭಾಜಿ ಪಾಟೀಲ್ (68) ಶುಕ್ರವಾರ ರಾತ್ರಿ ಹೃದಯಾಘಾತದಿಂದ ಕೊನೆಯುಸಿರೆಳೆದರು.

ಹಲವು ದಿನಗಳಿಂದ ಅನಾರೋಗ್ಯದ ಸಮಸ್ಯೆಯಿಂದ ಬಳಲುತ್ತಿದ್ದ ಸಂಭಾಜಿ ಪಾಟೀಲ ಅವರಿಗೆ ಏದುಸಿರು ಕಾಣಿಸಿಕೊಂಡ ಕಾರಣ ಕೆಎಲ್ಇ ಆಸ್ಪತ್ರೆಗೆ ದಾಖಲಿಸ ಲಾಗಿತ್ತು. ಆದರೆ, ಚಿಕಿತ್ಸೆ ಫಲಿಸದೆ ಕೊನೆಯುಸಿರೆಳೆದರು. ಅವರು ಪತ್ನಿ, ಪುತ್ರಿ ಹಾಗೂ ಅಪಾರ ಬಂಧುಬಳಗವನ್ನು ಅಗಲಿದ್ದಾರೆ.

ಸಂಭಾಜಿ ಪಾಟೀಲ್ ಅವರ ಅಂತ್ಯಕ್ರಿಯೆ ಶಹಾಪುರದಲ್ಲಿ ಬೆಳಗ್ಗೆ 11ಕ್ಕೆ ನೆರವೇರಲಿದೆ. ಸಂಭಾಜಿ ಪಾಟೀಲ ಅವರು ಶಾಸಕರಾಗುವ ಮೊದಲು ನಾಲ್ಕು ಬಾರಿ ಬೆಳಗಾವಿ ಮಹಾನಗರಪಾಲಿಕೆ ಮೇಯರ್ ಆಗಿ ಆಯ್ಕೆಯಾಗಿದ್ದರು. ಕೆಲ ತಿಂಗಳ ಹಿಂದಷ್ಟೇ ಸಂಭಾಜಿ ಪಾಟೀಲ ಅವರ ಪುತ್ರ ಸಾಗರ್ ಬೆಂಗಳೂರಿನಿಂದ ಬೆಳಗಾವಿಗೆ ರೈಲಿನಲ್ಲಿ ಬರುತ್ತಿದ್ದಾಗ ಕಾಲು ಜಾರಿ ಬಿದ್ದು ಮೃತಪಟ್ಟಿದ್ದರು. ಇಡಕಲ್ ಜಲಾಶಯದಿಂದ ಬೆಳಗಾವಿ ನಗರಕ್ಕೆ ನೀರು ಪೂರೈಕೆ ಮಾಡುವಲ್ಲಿ ಸಂಭಾಜಿ ಪಾಟೀಲ್ ಅವರ ವಿಶೇಷ ಕೊಡುಗೆ ಇತ್ತು. ಯೋಜನೆಗೆ ಅಂದಿನ ಸಿಎಂ ಬಂಗಾರಪ್ಪ ಅವರಿಂದ ಅನುದಾನ ಬಿಡುಗಡೆ ಮಾಡಿಸಿಕೊಂಡಿದ್ದರು.

**4 ಬಾರಿ ಬೆಳಗಾವಿ ಮೇಯರ್ ಆಗಿ ಆಯ್ಕೆಯಾಗುವ ಮೂಲಕ ಸಂಭಾಜಿ ಪಾಟೀಲ್ 2003ರಲ್ಲಿ ಹೊಸ ಇತಿಹಾಸ ಬರೆದಿದ್ದರು.**

**ಸಂಭಾಜಿ ಪಾಟೀಲ್ ಅವರ ಅಂತ್ಯಕ್ರಿಯೆ ಶಹಾಪುರದಲ್ಲಿ ಬೆಳಗ್ಗೆ 11ಕ್ಕೆ ನೆರವೇರಲಿದೆ**